ಕಡೂರು ಡಿಸ್ಟ್ರಿಕ್ಟು.

ತಾರೀಖು 1ನೇ ಜುಲೈ 1884.

ಇದರಿಂದ ತಿಳಿಯಪಡಿಸುವದೇನಂದರೆ, ತರೀಕೆರೆ ತಾಲ್ಲೂಕು ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಬೇವಾರಸ್ಸಾಗಿ ಇರತಕ್ಕ ಕೆಳಗೆ ವಿವರ ಸೋಣಾದ ದಸ್ತಾವೇಜುಗಳನ್ನು ಪಾಜರ್‌ಮಾಡಿದವರೆ ಆಗಲಿ ಅಥವಾ ವಾಪಸುಪಡಿಯಲಿಕ್ಕೆ ಅವರಿಂದ ಕ್ರಮವಾದ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರರೆ ಆಗಲಿ ಈ ನೋಟೀಸು ತಾರೀಖು ಲಾಗಾಯಿತು ಒಂದು ತಿಂಗಳವಳಗಾಗಿ ಸಬ್ ರಿಜಸ್ಟ್ರಾರ್ ರೂಬರು ಹಾಜರಾಗಿ ಅವುಗಳನ್ನ ವಾಪಸ್ ತೆಗದುಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಅನುಸರಿಸಿ ಅವುಗಳು ನಾಶಪಡಿಸಲ್ಪಡುವವು.

ದಸ್ತಾವೇಜು ನಂಬರ್.	ದಸ್ತಾವೇಜು ತಾರೀಖು.	ರಿಜಿಸ್ಟ್ರಾದ ತಾರೀಖು.	ದಸ್ತಾವೇಜು ಬರದು ಕೊಟ್ಟವರ ಹೆಸರು.	ದಸ್ತಾವೇಜು ಬರಸಿ ಕೊಂಡವರ ಹೆಸರು.	ದಸ್ತಾವೇಜಿನ ಸ್ವಭಾವ.
30	7—6—82	8—6—82	ಬುಕ್ಕಾಂಬುದಿ ವಾಸಸ್ಥ ಪುರುಷೊತ್ತಮೈನ ಮಗ ರಾಮಯ್ಯ	ಶಿವರಾಮೈನ ಮಗ ಕಂಕರಪ್ಪ	ಛಣಾಯ್ಕಿಪುರ ಗ್ರಾಮದಲ್ಲಿಯಿರುವ ಸರ್ವೆ ನಂಬರ್ 9ನೇ ಖುಷ್ಕಿ ಜಮೀನು ಪೈಕೀ 4ರಲ್ಲಿ ಬಂದು ಹಿಸ್ಸೆ 9 ರೂಪಾಯಿಗೆ ಕ್ರಯ
1882—83	22—4—81	ನಿರಾಕರ್ಷೆ 19—5—82	ಮಾದನಹಳ್ಳಿ ನಂಜಪ್ಪನ ಮಗ ನಂಜುಂಡಯ್ಯ	ಬೆಟ್ಟದಹಳ್ಳಿ ಶಿವಚಾರದ ಮರಿಲಿಂಗಪ್ಪನ ಮಗ ರುದ್ರಣ	ಬೆಟ್ಟತಾವರೆಕೆರೆ, ಸಿದ್ದರಹಳ್ಳಿ, ನೇರ್ಲಕೆರೆ ಈ ಗ್ರಾಮಗಳಲ್ಲಿ ಯಿರುವ ತರಿ, ಖುಷ್ಕಿ ಬಾಗಾಯತು ಸಹಾ 500 ರೂಪಾಯಿಗೆ 5 ವರುಷ ಭೋಗ್ಯ

ಜಿ. ಯಫ್. ಮೈಕಲ್‌ಜಾರ್ಜ್,
ರಿಜಿಸ್ಟ್ರಾರ್.

ಗವರ್ನಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನಿಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ಧರ್ಮಾರ್ಥ ವಾಗಿ ಗವರ್ನಮೆಂಟ್ ಆಫೀಸರ್‌ಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಡುಗಳು ತೆಗದುಕೊಳ್ಳುವ ಯಾವ ಮನುಷ್ಯನಾದರೂ ಕಲ್‌ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರ್‌ಟೆಂಡೆಂಟರ ದೆಸೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡು ಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 4—8—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 8—8—0; ಒಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 16—8—0; ಬೊಟಾನಿಕಲ್ ಗಾರ್ಡನ್ ಸೂಪರ್‌ಟೆಂಡೆಂಟರು ಇದರಡೀ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಒದಗಿಸ ಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಒಂದಕ್ಕೆ ರೂ. 5—8—0, ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 10—8—0, ಒಂದು ಪೌಂ ವುಳ್ಳ ಡಬ್ಬಿಗೆ 20 ರೂಪಾಯಿ. ಈ ಔಷಧವು, ಕಲ್‌ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯನ್ ನೇಟಿವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ. ಸದರೀ ಕಿಮ್ಮತಿನೊಂದಿಗೆ ದರ 4 ವ 8 ಔನ್ಸ್ ತಗರದ ಡಬ್ಬೀಗೆ ಎಂಟು ಆಣೆ ಟಪ್ಪಾಲ್ ಹಾಸಲೂ, ಒಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.